ವಿಜಯವಾಣಿ
ಕನ್ನಡಿಗರ ಧ್ವನಿ

**Saturday 29th July 2023, Page No.9c**

# VTU Doctorate: Sri A.V.S. Murthy

## ಚುಂಚಶ್ರೀ ಸೇರಿ ಮೂವರಿಗೆ ವಿಟಿಯು ಡಾಕ್ಟರೇಟ್

**ಬೆಳಗಾವಿ:** ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ 23ನೇ ವಾರ್ಷಿಕ ಘಟಿಕೋತ್ಸವದಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನಮಠದ ಪೀಠಾಧಿಪತಿ ಜಗದ್ಗುರು ಶ್ರೀ ಡಾ.ನಿರ್ಮಲಾನಂದನಾಥ ಸ್ವಾಮೀಜಿ, ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್‌ನ ಗೌರವ ಕಾರ್ಯದರ್ಶಿ ಡಾ.ಎ.ವಿ.ಎಸ್.ಮೂರ್ತಿ ಹಾಗೂ ಮೈಸೂರು ಮೆರ್ಕ್ಯಾರ್ನ್ ಟ್ರೈಲ್ ಕಂಪನಿಯ ಎಂಡಿ ಎಚ್.ಎಸ್.ಶೆಟ್ಟಿ ಅವರಿಗೆ 'ಡಾಕ್ಟರ್ ಆಫ್ ಸೈನ್ಸ್' ಪದವಿ ಪ್ರದಾನ ಮಾಡಲಾಗುವುದು



ಎಂದು ವಿಟಿಯು ಕುಲಪತಿ ಡಾ.ಎಸ್.ವಿದ್ಯಾಶಂಕರ ಹೇಳಿದರು. ವಿಶ್ವವಿದ್ಯಾಲಯದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಆ.1ರ ಬೆಳಗ್ಗೆ 11.30ಕ್ಕೆ ವಿಶ್ವವಿದ್ಯಾಲಯದ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ಸಭಾಂಗಣದಲ್ಲಿ ಘಟಿಕೋತ್ಸವ ಆಯೋಜಿಸಲಾಗಿದ್ದು, 550 ಪಿಎಚ್.ಡಿ 04 (ಎಂಎಸ್‌ಸಿ ಇಂಜಿನಿಯರಿಂಗ್) ಬೈ ರಿಸರ್ಚ್ ಮತ್ತು ಎರಡು ಇಂಟಿಗ್ರೇಟೆಡ್ ಡ್ಯುಯಲ್ ಪದವಿ ಸೇರಿ 556 ಸಂಶೋಧನಾ ಪದವಿ ಹಾಗೂ ಬಿಇ, ಬಿ.ಟೆಕ್‌ನಲ್ಲಿ 42,545 ಹಾಗೂ ಬಿ.ಆರ್ಕಿಟೆಕ್ಚರ್ ವಿಭಾಗದಲ್ಲಿ 1,003 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಗುವುದು ಎಂದರು.